ಅಬಕಾರಿ ಇಲಾಖೆಯ ಭ್ರಷ್ಟ ಅಧಿಕಾರಿ, ನೌಕರರ ವಿರುದ್ಧ ಕ್ರಮ ಕೈಗೊಳ್ಳಲು ಸಿಎಂಗೆ ಮನವಿ

ಬೆಂಗಳೂರು, ನ.11: ಅಬಕಾರಿ ಸನ್ನದು ದಾರರಿಗೆ ಇಲಾಖೆಯ ಅಧಿಕಾರಿ, ನೌಕರರು ಅನಾವಶ್ಯವಾಗಿ ತೊಂದರೆ ನೀಡುತ್ತಿದ್ದು, ಭ್ರಷ್ಟ ಅಧಿಕಾರಿ, ನೌಕರರ ವಿರುದ್ಧ ಕೂಡಲೇ ಕಾನೂನು ಕ್ರಮಕೈಗೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ 'ಕರ್ನಾಟಕ ರಾಜ್ಯ ಲಿಕ್ಕರ್ ಮರ್ಚೆಂಟ್ಸ್ ಡೆವಲಪ್‌ಮೆಂಟ್ ಕೋ-ಆಪರೇಟಿವ್ ಸೊಸೈಟಿ'ಯು ಮನವಿ ಮಾಡಿದೆ.

ಸೋಮವಾರ ಈ ಸಂಬಂಧ ಸೊಸೈಟಿ ಪದಾಧಿಕಾರಿಗಳು ಮುಖ್ಯಮಂತ್ರಿಯನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದು, ಮದ್ಯ ಮಾರಾಟಗಾರರಿಗೆ ಹಾಲಿ ಇರುವಂತಹ ಶೇ.10 ಲಾಭಂಶದಲ್ಲಿ ಖರ್ಚು ವೆಚ್ಚವನ್ನೆಲ್ಲ ಕಳೆದರೆ ವ್ಯವಹಾರ ನಿರ್ವಹಿಸುವುದು ಕಷ್ಟಕರವಾಗಿರುತ್ತದೆ. ಹಾಗಾಗಿ ಹಾಲಿ

ಇರುವಂತಹ ಶೇ.10ರ ಬದಲಾಗಿ ಲಾಭಂಶವನ್ನು ಶೇ.15ಕ್ಕೆ ನಿಗದಿಪಡಿಸಬೇಕು ಎಂದು ಆಗ್ರಹಿಸಿದೆ.

ಒಂದು ಸನ್ನದಿಗೆ ಮೂರು ಮೊಕದ್ದಮೆಗಳು ದಾಖಲಾದರೆ ಅಂತಹ ಸಂದರ್ಭಗಳಲ್ಲಿ ಸನ್ನದುಗಳನ್ನು ಅಮಾನತುಪಡಿಸುವುದರ ಸುತ್ತೋಲೆಯನ್ನು ಮಾರ್ಪಡಿಸಿ ಪ್ರಕರಣದ ಸ್ವರೂಪ ಮತ್ತು ನ್ಯೂನತೆಗಳನ್ನು ಪರಿಶೀಲಿಸಿ ಅಬಕಾರಿ ನಿಯಮಗಳಡಿಯಲ್ಲಿ ಜಿಲ್ಲೆಯ ಅಬಕಾರಿ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಸುತೋಲೆ ಹೊರಡಿಸಬೇಕು ಎಂದು ಮನವಿ ಮಾಡಿದೆ.

ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿ ಇರುವ ಕಟ್ಟು ನಿಟ್ಟಿನ ಅಬಕಾರಿ ನಿಯಮಗಳು ಇತರ ರಾಜ್ಯಗಳು ಅನುಸರಿಸುತ್ತಿದೆ. ಹೀಗಾಗಿ ಈಗಿರುವ ನಿಯಮಗಳನ್ನೇ ಅನುಸರಿಸಬೇಕು ಎಂದು ಕರ್ನಾಟಕ ರಾಜ್ಯ ಲಿಕ್ಕರ್ ಮರ್ಚೆಂಟ್ಸ್ ಡೆವಲಪ್‌ಮೆಂಟ್ ಕೋ-ಆಪರೇಟಿವ್ ಸೊಸೈಟಿಯು ಹೇಳಿದೆ.

ನ.15ರಿಂದ ಮಲ್ಲೇಶ್ವರಂ ಕಡಲೆಕಾಯಿ ಪರಿಷೆ

ಕಾಡು ಮಲ್ಲೇಶ್ವರ ಗೆಳೆಯರ ಬಳಗದಿಂದ ಆಯೋಜನೆ: ಬಿ.ಕೆ.ಶಿವರಾಂ

ಬೆಂಗಳೂರು, ನ.11: ಮಲ್ಲೇಶ್ವರಂನ ಕಾಡು ಮಲ್ಲೇಶ್ವರ ಗೆಳೆಯರ ಬಳಗದಿಂದ ನ.15ರಿಂದ 18ರ ವರೆಗೆ 8ನೇ ರೈತ ಸ್ನೇಹಿ 'ಕಡಲೆಕಾಯಿ ಪರಿಷೆ' ಹಾಗೂ ಕನ್ನಡ ರಾಜ್ಯೋತ್ಸವದ ಪ್ರಯುಕ್ತ '200ರ ಹುಣ್ಣಿಮೆ ಹಾಡು' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಗೆಳೆಯರ ಬಳಗದ ಅಧ್ಯಕ್ಷ ಬಿ.ಕೆ.ಶಿವರಾಂ ಮಾಹಿತಿ ನೀಡಿದ್ದಾರೆ.

ಸೋಮವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವನಗುಡಿ ಕಡಲೆಕಾಯಿ ಪರಿಷೆಯಂತೆ 'ಮಲ್ಲೇಶ್ವರಂ ಕಡಲೆಕಾಯಿ ಪರಿಷೆ'ಯು ಪ್ರಸಿದ್ಧಿ ಪಡೆದಿದೆ. 8 ವರ್ಷಗಳಿಂದ ಕಡಲೆಕಾಯಿ ಪರಿಷೆಯನ್ನು ಯಶ್ವಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ. ಈ ಬಾರಿ ಪರಿಷೆಯಲ್ಲಿ 8 ಲಕ್ಷಕ್ಕೂ ಹೆಚ್ಚು ಜನ ಭಾಗವಹಿಸುವ ಸಾಧ್ಯತೆ ಇದೆ ಎಂದು ಹೇಳಿದರು.

ಕನ್ನಡ ನಾಡಿನ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿ ಉಳಿಯಬೇಕು ಮತ್ತು ಮುಂದಿನ ಪೀಳಿಗೆಗೆ ಅದರ ಅರಿವು ಮೂಡಿಸಬೇಕೆಂಬ ಉದ್ದೇಶದಿಂದ 2010ರಲ್ಲಿ ಹುಣ್ಣಿಮೆ ಹಾಡು ಕಾರ್ಯಕ್ರಮವನ್ನು ಆರಂಭಿಸಲಾಯಿತು. ಕಾರ್ಯಕ್ರಮದಲ್ಲಿ ಯಕ್ಷಗಾನ, ನಾಟಕ,

ಕರ್ನಾಟಕ ಸಂಗೀತ, ಬುಡಕಟ್ಟುಗಳ ಕಲಾಪ್ರದರ್ಶನ, ಮಚನಗಾಯನ, ನೃತ್ಯ, ಹುಣ್ಣಿಮೆ ಹಾಡಿನಲ್ಲಿ ನೂರಾರು ಕಲಾವಿದರು ಪ್ರದರ್ಶನ ಮಾಡಲಿದ್ದಾರೆ. ಜನರಿಗೆ ಅರಿವು ಮೂಡಿಸುವುದರ ಜೊತೆಗೆ ಕಲಾವಿದರಿಗೂ ಪ್ರೋತ್ಸಾಹ, ಸಹಕಾರ ನೀಡಲಾಗುತ್ತಿದೆ ಎಂದು ಬಿ.ಕೆ. ಶಿವರಾಂ ತಿಳಿಸಿದರು.

ನಾಲ್ಕು ದಿನಗಳ ಕಡಲೆಕಾಯಿ ಪರಿಷೆಯಲ್ಲಿ ಕರ್ನಾಟಕ, ತಮಿಳು ನಾಡು, ಆಂಧ್ರ, ತೆಲಂಗಾಣದಿಂದ ರೈತರು ಕಡಲೆಕಾಯಿ ತಂದು ಮಾರಾಟ ಮಾಡಲಿದ್ದಾರೆ. ರೈತರು, ಬೀದಿ-ಬದಿ ವ್ಯಾಪಾರಿಗಳಿಗೆ 400ಕ್ಕೂ ಹೆಚ್ಚು ಮಳಿಗೆಗಳಿಗೆ ಅವಕಾಶ ನೀಡಲಾಗಿದೆ. ಪರಿಸರ ಸ್ನೇಹಿ, ಸ್ವಚ್ಛತೆಗೆ ಆದ್ಯತೆ ನೀಡಲಾಗುತ್ತಿದ್ದೂ, ಪ್ಲಾಸ್ಟಿಕ್ ಮುಕ್ತ, ಕೈ ಬಟ್ಟೆ ಚೀಲ, ಪೇಪರ್ ಕವರ್‌ಗಳನ್ನು ಬಳಸುವಂತೆ ಪ್ರೋತ್ಸಾಹ ನೀಡಲು ಸಾರ್ವಜನಿಕರಿಗೆ ಉಚಿತವಾಗಿ ನೀಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು. ನ.15ರ ಸಂಜೆ 4:30ಕ್ಕೆ ಮಾಜಿ ಮುಖ್ಯಮಂತ್ರಿ ಡಾ.ಎಂ.ವೀರಪ್ಪ ಮೊಯ್ಲಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕನ್ನಡ ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಶಾಸಕ ಡಾ.ಅಶ್ವತ್ಥನಾರಾಯಣ್ ಸಹಿತ ಹಲವರು ಭಾಗವಹಿಸಲಿದ್ದಾರೆ.

ನ.16ರ ಸಂಜೆ 6:30ಕ್ಕೆ, ಹುಣ್ಣಿಮೆ ಹಾಡು-201 ಬೆಳದಿಂಗಳ ಬೆಸದ ಹುಣ್ಣಿಮೆ ಹಾಡು 200ರ ಸಂಭ್ರಮದಲ್ಲಿ ಡಾ.ಹಂಸಲೇಖ ಮತ್ತು ತಂಡದವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ಬಿ.ಕೆ.ಶಿವರಾಂ ತಿಳಿಸಿದರು. ಸಮಾಜ ಸೇವಕ ಅನೂಪ್ ಅಯ್ಯಂಗಾರ್, ಗೆಳೆಯರ ಬಳಗದ ಪದಾಧಿಕಾರಿಗಳಾದ ಚಂದ್ರಶೇಖರ್ ನಾಯ್ಡು, ಶ್ರೀವಲ್ಲಭ, ಚಂದ್ರಮೌಳಿ, ಎಲ್.ಎನ್.ಪ್ರಭು, ರಾಜ ಶಶಿಧರ್, ಡಾ.ಲೀಲಾ ಸಂಪಿಗೆ, ಹೇಮಂತ್, ಇತರರು ಉಪಸ್ಥಿತರಿದ್ದರು.

ಫ್ರೆಂಚ್ ಭಾಷಾ ಶಿಕ್ಷಣ ಉತ್ತೇಜಿಸಲು ತರಬೇತಿ

ಬೆಂಗಳೂರು, ನ.11: ಬೆಂಗಳೂರು ನಗರ ವಿವಿ ಸ್ಯಾಂಟರ್ ಫಾರ್ ಗ್ಲೋಬಲ್ ಲ್ಯಾಂಗ್ವೇಜ್ ಭಾರತದಲ್ಲಿನ ಫ್ರಾಂಚೈಸ್ ಇನ್‌ಸ್ಟಿಟ್ಯೂಟ್, ಫ್ರಾನ್ಸ್ ರಾಯಭಾರಿ ಕಚೇರಿ ಮತ್ತು ಅಲಯನ್ಸ್ ಫ್ರಾಂಕಾಯಿಸ್, ಕಾವಿಲಾಮ್, ಫ್ರಾನ್ಸ್ ಸಹಯೋಗದೊಂದಿಗೆ ಭಾರತದಲ್ಲಿ ಫ್ರೆಂಚ್ ಶಿಕ್ಷಕರಿಗೆ 3 ದಿನಗಳ ತರಬೇತಿ ಆಯೋಜಿಸಲಾಗಿತ್ತು.

'ಸಿನೆಮಾ ಎಟ್ ಎಫ್‌ಎಲ್‌ಇ' ಎಂಬ ಕಾರ್ಯಕ್ರಮದಲ್ಲಿ ಭಾರತದಾದ್ಯಂತ ಫ್ರೆಂಚ್ ಶಿಕ್ಷಕರು ಭಾಗವಹಿಸಿದರು. ಈ ಕಮ್ಮಟದಲ್ಲಿ ಫ್ರೆಂಚ್ ಅನ್ನು ವಿದೇಶಿ ಭಾಷೆಯಾಗಿ ತರಗತಿಗಳಲ್ಲಿ ಕಲಿಸಲು ಸಿನೆಮಾವನ್ನು ಶಿಕ್ಷಣದ ಸಾಧನವಾಗಿ ಬಳಸುವ ಬಗ್ಗೆ ಚರ್ಚಿಸಲಾಯಿತು. ಈ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಫ್ರಾನ್ಸ್‌ನ ಅಲಯನ್ಸ್ ಫ್ರಾಂಸೈಸ್ ಕಾವಿಲಮ್‌ನ ಮಿಸ್ ಫ್ಲೋರಿನ್ ಟೂಲೂಸ್ ಹಾಜರಾಗಿದ್ದರು.

ಈ ಸಂದರ್ಭದಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಲಿಂಗರಾಜ ಗಾಂಧಿ, ಅಟ್ಯಾಚೆ ಪಾರ್ ಕೋ ಅಪರೇಷನ್ ಇನ್ ಎಜುಕೇಷನ್‌ನ ಸೈಪಿನಿ ಆರ್ಫಿಲ, ಭಾರತದ ಇನ್‌ಸ್ಟಿಟ್ಯೂಟ್ ಫ್ರಾಂಚೈಸ್‌ನ ಥಾಮಸ್ ಚೌಮೊಂಟ್, ಅಟ್ಯಾಚೆ ಪಾರ್ ಫ್ರೆಂಚ್ ಲ್ಯಾಂಗ್ವೇಜ್‌ನ ಜತೀಂದರ್ ಸಿಂಗ್, ಶಿಕ್ಷಣ ಸಹಾಯಕರಾಗಿ ಸ್ಮೃತಿ ಪದ್ಮಾ ಹಾಗೂ ಸ್ಯಾಂಟರ್ ಫಾರ್ ಗ್ಲೋಬಲ್ ಲ್ಯಾಂಗ್ವೇಜ್‌ನ ಮುಖ್ಯಸ್ಥೆ ಡಾ.ಜ್ಯೋತಿ ವೆಂಕಟೇಶ್ ಉಪಸ್ಥಿತರಿದ್ದರು.

ಎಣ್ಣೆಬೀಜ ಬೆಳೆಗಾರರ ಮಹಾಮಂಡಳಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಬೆಂಗಳೂರು, ನ. 11: ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮಾಜಿ ಸಚಿವ ವೆಂಕಟ್‌ರಾವ್ ನಾಡಗೌಡ ಅಧ್ಯಕ್ಷರಾಗಿ ಪುನರಾಯ್ಕೆಯಾಗಿದ್ದಾರೆ ಮತ್ತು ಎನ್. ಸೂಗನಗೌಡ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಮಹಾಮಂಡಳ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಈ ಹೊತ್ತಿಗೆ ಪ್ರಶಸ್ತಿಗೆ ಹಸ್ತಪ್ರತಿ ಆಹ್ವಾನ

ಬೆಂಗಳೂರು, ನ.11: ಈ ಹೊತ್ತಿಗೆ ಟ್ರಸ್ಟ್ ವತಿಯಿಂದ ನೀಡುವ 2025ನೇ ಸಾಲಿನ ಈ ಹೊತ್ತಿಗೆ ಪ್ರಶಸ್ತಿಗೆ ಹಸ್ತಪ್ರತಿಗಳನ್ನು ಆಹ್ವಾನಿಸಲಾಗಿದೆ.

ಅಪ್ರಕಟಿತ ಸಂಕಲನದಲ್ಲಿರುವ ಕಥೆಗಳು, ಕವನಗಳು ಸ್ವತಂತ್ರವಾಗಿರಬೇಕು. ಸಂಕಲನದಲ್ಲಿ ಕಡ್ಡಾಯವಾಗಿ ಅನುವಾದಿತ ಕಥೆ, ಕವನಗಳು ಇರಬಾರದು. ಕಥಾ ಸಂಕಲನವು 8ರಿಂದ 10 ಕಥೆಗಳನ್ನು ಒಳಗೊಂಡಿರಬೇಕು. ಕವನ ಸಂಕಲನವಾದರೆ 35-40 ಕವನಗಳನ್ನು ಒಳಗೊಂಡಿರಬೇಕು. ಚುಟುಕುಗಳನ್ನು ಕಳಿಸುವಂತಿಲ್ಲ.

ಸಂಕಲನದಲ್ಲಿ ಕಡ್ಡಾಯವಾಗಿ ಸಂಕಲನದ ಶೀರ್ಷಿಕೆ ಮತ್ತು ಪರಿವಿಡಿ ಇರಬೇಕು. ಡಿಟಿಪಿ ಮಾಡಿಸಿ, ಬೈಂಡ್ ಮಾಡಿಸಿದ ಅಪ್ರಕಟಿತ ಸಂಕಲನದ ಮೂರು ಪ್ರತಿಗಳನ್ನು ಕಳುಹಿಸಿಕೊಡಬೇಕು. ಕವಿಗಳು, ಕಥೆಗಾರರು ಪ್ರತ್ಯೇಕ ಹಾಳೆಯಲ್ಲಿ ತಮ್ಮ ಹೆಸರು, ಸಂಕಲನದ ಹೆಸರು, ಸಂಪೂರ್ಣ ವಿಳಾಸ, ಇತ್ತೀಚಿನ ಭಾವಚಿತ್ರ, ಮೊಬೈಲ್ ಸಂಖ್ಯೆಯನ್ನು ಬರೆದಿರಬೇಕು. ಪ್ರಶಸ್ತಿ ಘೋಷಣೆಯಾದ 30ದಿನಗಳಲ್ಲಿ ಪ್ರಶಸ್ತಿ ಪಡೆದ ಸಂಕಲನವು ಮುದ್ರಣಗೊಳ್ಳಬೇಕು. ಕೃತಿ ಮುದ್ರಣಗೊಂಡರೆ ಮಾತ್ರ ಘೋಷಿತ ಬಹುಮಾನದ ಮೊತ್ತ ಹಾಗೂ ಪ್ರಶಸ್ತಿ ಫಲಕವು ಈ ಹೊತ್ತಿಗೆಯ ಹೊನಲು ಸಮಾರಂಭದಲ್ಲಿ ನೀಡಲಾಗುತ್ತದೆ.

ಪ್ರಶಸ್ತಿ ವಿಜೇತರಿಗೆ ತಲಾ 10ಸಾವಿರ ರೂ. ನಗದು ಬಹುಮಾನ ಹಾಗೂ ಪ್ರಶಸ್ತಿ ಫಲಕ ನೀಡಲಾಗುತ್ತದೆ. ಅಪ್ರಕಟಿತ ಕಥಾ ಸಂಕಲನ, ಕವನ ಸಂಕಲನ ನಮಗೆ ತಲುಪಲು ನವೆಂಬರ್ 20 ಕೊನೆಯ ದಿನ.

ಈ ಹೊತ್ತಿಗೆ, 65, ಮುಗುಳ್ಳಗೆ, 3ನೇ ಅಡ್ಡರಸ್ತೆ, ಪಿ.ಎನ್.ಬಿ ನಗರ, ದೊಡ್ಡಕಲ್ಲಸಂದ್ರ, ಕೋಣನಕುಂಟೆ, ಬೆಂಗಳೂರು-560062 ವಿಳಾಸಕ್ಕೆ ಹಸ್ತಪ್ರತಿ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ 9611782621ಕ್ಕೆ ಸಂಪರ್ಕಿಸಲು ಎಂದು ಪ್ರಕಟನೆ ತಿಳಿಸಿದೆ.

'ಗುಲಾಮಗಿರಿ' ಕೃತಿಗೆ 150 ವರ್ಷ ನ.14ರಂದು ವಿಶೇಷ ಉಪನ್ಯಾಸ

ಬೆಂಗಳೂರು, ನ.11: ನವಯಾನ ಟ್ರಸ್ಟ್ ವತಿಯಿಂದ ನವೆಂಬರ್ 14ರಂದು ನಗರದ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿರುವ ದೇವರಾಜ ಅರಸು ಆರ್ಟ್ ಗ್ಯಾಲರಿಯಲ್ಲಿ ಜ್ಯೋತಿಬಾ ಪುಲೆ ಅವರ 'ಗುಲಾಮಗಿರಿ' ಕೃತಿಗೆ 150 ವರ್ಷ ಕುರಿತು ವಿಶೇಷ ಉಪನ್ಯಾಸ ನಡೆಯಲಿದೆ.

ಉಪನ್ಯಾಸವನ್ನು ವಿಶ್ರಾಂತ ಪ್ರಾಧ್ಯಾಪಕ ಪ್ರೊ.ವಲೇರಿಯನ್ ರಾಡ್ರಿಗಸ್ ನೀಡಲಿದ್ದು, ಹಾಡುಗಾರ್ತಿ ಶಿಲ್ಪಾ ಮುಡುಬಿ, ರಂಗಕರ್ಮಿ ಕೆ.ಪಿ.ಲಕ್ಷ್ಮಣ್, ಪ್ರವೀಣ್ ತೆಲ್ಲಪಲ್ಲಿ ಪ್ರತಿಕ್ರಿಯೆ ನೀಡಲಿದ್ದಾರೆ. ಚಿಂತಕ ವಿ.ಎಲ್.ನರಸಿಂಹಮೂರ್ತಿ ಮತ್ತಿತರರು ಉಪಸ್ಥಿತರಿರುತ್ತಾರೆ ಎಂದು ಪ್ರಕಟನೆ ತಿಳಿಸಿದೆ.

ಜಿಸ್ ಸಂಸ್ಥೆಯ ಜಾಗತಿಕ ಸಾಮರ್ಥ್ಯ ಕೇಂದ್ರ ಉದ್ಘಾಟನೆ

ಬೆಂಗಳೂರು, ನ.11: ಆಪ್ಟೊ ಇಲೆಕ್ಟ್ರಾನಿಕ್ಸ್‌ನಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಜಿಸ್ ಸಂಸ್ಥೆಯ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು(ಜಿಸಿಸಿ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಇಲೆಕ್ಟ್ರಾನಿಕ್ಸ್, ಐಟಿ ಮತ್ತು ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿದ್ದಾರೆ.

ಜಿಸ್ ಇಂಡಿಯಾ ಗ್ಲೋಬಲ್ ಕೆಪಾಬಿಲಿಟಿ ಸೆಂಟರ್ ತಂತ್ರಜ್ಞಾನದ ಪರಿಹಾರಗಳನ್ನು ಚಾಲನೆ ಮಾಡಲು ಮತ್ತು ಜಾಗತಿಕ ಆರ್ ಆ್ಯಂಡ್ ಡಿ ಸಾಮರ್ಥ್ಯಗಳನ್ನು ಮತ್ತಷ್ಟು ವಿಸ್ತರಿಸಲು ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಸ್ಥಾಪಿಸಲಾಗಿದೆ. ಕೇಂದ್ರದ ಆವರಣವು 43ಸಾವಿರ ಚ.ಅಡಿಯಲ್ಲಿ ವ್ಯಾಪಿಸಿದ್ದು, ವೈದ್ಯಕೀಯ ತಂತ್ರಜ್ಞಾನಗಳು, ವಿಷನ್ ಕೇರ್, ಸೈಬರ್ ಸೆಕ್ಯುರಿಟಿ, ಆರ್ಟಿಫಿಶಿಯಲ್ ಇಂಟೆಲಿಜೆನ್ಸ್, ಕ್ಲೌಡ್ ಎಕ್ಸಲೆನ್ಸ್ ಮತ್ತು ಡಿಜಿಟಲ್ ಟ್ರಾನ್ಸ್ ಫರ್ಮೇಷನ್ ಗಾಗಿ ಅಪ್ಲಿಕೇಶನ್ ಸಂಶೋಧನೆಯ ಕ್ಷೇತ್ರದಲ್ಲಿ ಆಳವಾದ ಡೊಮೇನ್ ಪರಿಣತಿಯನ್ನು ಹೊಂದಿರುವ 600+ ಉದ್ಯೋಗಿಗಳಿಗೆ ಅವಕಾಶ ಕಲ್ಪಿಸುತ್ತದೆ.

ಭಾರತವು ಈಗ 4ಸಾವಿರ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಹೊಂದಿದೆ. ಇವುಗಳಲ್ಲಿ ಕರ್ನಾಟಕದ ಪಾಲು ಶೇ.38 ರಷ್ಟಿದೆ. ರಾಜ್ಯವು ಅಗ್ರಿಟೆಕ್, ಏರೋಸ್ಪೇಸ್ ಮತ್ತು ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬೆಳವಣಿಗೆಯನ್ನು ಹೆಚ್ಚಿಸುವ ಸಾಮರ್ಥ್ಯವನ್ನು ಸಂಸ್ಥೆ ಹೊಂದಿದೆ.

ಮಕ್ಕಳ ಶಿಕ್ಷಣದಲ್ಲಿ ಪೋಷಕರ ಪಾತ್ರ ಮುಖ್ಯ: ಮಲ್ಲಣ್ಣ ಐಕೂರ

ಬೆಂಗಳೂರು, ನ.11: ಮಕ್ಕಳ ಶೈಕ್ಷಣಿಕ ಮತ್ತು ಸಾಮಾಜಿಕ ಬೆಳವಣಿಗೆಯಲ್ಲಿ ಶಿಕ್ಷಕರಿಗಿಂತ ಪೋಷಕರ ಪಾತ್ರ ಬಹಳ ಮುಖ್ಯ ಎಂದು ಯಾದಗಿರಿ ಜಿಲ್ಲಾ ಕುರುಬ ಸಂಘದ ಅಧ್ಯಕ್ಷ ಮಲ್ಲಣ್ಣ ಐಕೂರ ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಶಹಪುರ ತಾಲೂಕಿನ ಸೈದಾಪುರದಲ್ಲಿರುವ ಹೊಸಬೆಳಕು ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಯುನೈಟೆಡ್ ಪಬ್ಲಿಕ್ ಶಾಲೆಯ ಸಭೆಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳನ್ನು ಬಿತ್ತಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪನ್ಯಾಸಕ ಶರಣಗೌಡ ಚೈನಾಪುರ, ಪ್ರಾಂಶುಪಾಲ ಅಂಬಲಯ್ಯ ಸೈದಾಪುರ, ವೀರಭದ್ರೇಶ್ವರ ಸಂಸ್ಥಾನ ಹಿರೇಮಠದ ಸಿದ್ದರಾಮೇಶ್ವರ ಸ್ವಾಮೀಜಿ, ತಿರುಪತಿಗೌಡ ಬಾಣತಿಯಾಳ, ಹೊಸಬೆಳಕು ಶಿಕ್ಷಣ, ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಶರಣಬಸವ ಪೊಲೀಸ್ ಬಿರಾದಾರ, ಕಾರ್ಯದರ್ಶಿ ಶಿವಲಿಂಗಮ್ಮ, ಮುಖ್ಯ ಶಿಕ್ಷಕಿ ದೇವಮ್ಮ ಶಿರವಾಳ, ಶಿಕ್ಷಕ ಜೆಟ್ಟಿಪ್ಪ ಪೂಜಾರಿ ಮತ್ತಿತರರು ಉಪಸ್ಥಿತರಿದ್ದರು.

ದುರಸ್ತಿ ಕಾಮಗಾರಿ: ಹಲವೆಡೆ ನೀರು, ವಿದ್ಯುತ್ ವ್ಯತ್ಯಯ

ಬೆಂಗಳೂರು, ನ.11: ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ವೃಷಭಾವತಿ ವಿದ್ಯುತ್ ಸ್ಥಾವರದಿಂದ ತಾತಗುಣಿ ವಿದ್ಯುತ್ ಸ್ಥಾವರದ 220ಕೆ.ವಿ. ವಿದ್ಯುತ್ ಮಾರ್ಗದಲ್ಲಿ ಹಲವು ಪರಿಕರಗಳನ್ನು ತುರ್ತಾಗಿ ಬದಲಾಯಿಸುವ ಕಾರ್ಯ ನಡೆಯಲಿದೆ. ಈ ದುರಸ್ತಿ ಕಾಮಗಾರಿ ಹಿನ್ನೆಲೆಯಲ್ಲಿ ನವೆಂಬರ್ 14ರಂದು ನಗರದ ಬಹುತೇಕ ಕಡೆ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಂಗಳೂರು ಜಲಮಂಡಳಿ ತಿಳಿಸಿದೆ.

220 ಕೆ.ವಿ. ಹೈ ಲೆವೆಲ್ ಬಸ್ ಜಿಒಎಸ್ ಮತ್ತು ಇತರ ಪರಿಕರಗಳನ್ನು ತುರ್ತಾಗಿ ತಾತಗುಣಿ 220 ಕೆ.ವಿ.ವಿದ್ಯುತ್ ಸ್ಥಾವರದಲ್ಲಿ ಹಾಗೂ ಕಾವೇರಿ ನೀರು ಸರಬರಾಜು ಯೋಜನೆಯ ಎಲ್ಲ ಹಂತಗಳ ಜಲರೇಚಕ ಯಂತ್ರಗಾರಗಳಲ್ಲಿ ಅಳವಡಿಸಲಾಗುತ್ತಿದೆ. ಹೀಗಾಗಿ, ನ.14ರ ಗುರುವಾರ ಬೆಳಗ್ಗೆ 10:30ರಿಂದ ಮಧ್ಯಾಹ್ನ 12:30ರವರೆಗೆ ಒಟ್ಟು 2 ಗಂಟೆಗಳ ಕಾಲ ಸ್ಥಗಿತಗೊಳಿಸಲಾಗುತ್ತಿದೆ. ಅಂದು ಕಾವೇರಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಬೆಂಗಳೂರು ಜಲಮಂಡಳಿ ಹೇಳಿದೆ.

ಇನ್ನು, ನವೆಂಬರ್ 13ರಂದು ಬೆಳಗ್ಗೆ 10:30ರಿಂದ ಮಧ್ಯಾಹ್ನ 3:30ರವರೆಗೆ 66/11 ಕೆ.ವಿ. ಹೆಣ್ಣೂರು ರೋಡ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕೆಲಸ ನಿರ್ವಹಿಸುವುದರಿಂದ ಬೆಂಗಳೂರಿನ ಹಲವೆಡೆ ವಿದ್ಯುತ್ ಸಂಪರ್ಕ ಕಡಿತಗೊಳ್ಳಲಿದೆ ಎಂದು ಬೆಸ್ಕಾಂ ತಿಳಿಸಿದೆ.

ಮುಖ್ಯವಾಗಿ ಹೆಣ್ಣೂರು ಬಂಡೆ, ಸಮುದ್ರಿಕಾ ಎನ್‌ಕ್ಲೇವ್, ಗ್ರೇಸ್ ಗಾರ್ಡನ್, ಕ್ರಿಸ್ತು